ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 17/04/2019

## ಎಸ್ಸಿ, ಎಸ್ಟಿ ನೌಕರರ ಬಡ್ತಿ ಮೀಸಲಿಗೆ ತಡೆ

ಕ.ಪ್ರ. 17-4-19

ನವದೆಹಲಿ: ಎಸ್ಸಿ, ಎಸ್ಟಿ ಸರ್ಕಾರಿ ನೌಕರರಿಗೆ ಮೀಸಲಾತಿ ಆಧಾರದಲ್ಲಿ ಬಡ್ತಿ ನೀಡುವುದಕ್ಕೆ ಸುಪ್ರೀಂಕೋರ್ಟ್ ತಡೆ ನೀಡಿದೆ. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಮೀಸಲು ಬಡ್ತಿಗೆ ಸಂಬಂಧಿಸಿದಂತೆ ಪ್ರಮಾಣೀಕೃತ ಮಾಹಿತಿಯನ್ನು ಸಲ್ಲಿಸಲು ವಿಫಲವಾದ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಸೋಮವಾರ ತಡೆ ನೀಡಿ ಜತೆಗೆ ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶಿಸಿದೆ. ವಿವರ ➘ 15ಕ್ಕೆ

# ಎಸ್ಸಿ, ಎಸ್ಟಿ ನೌಕರರಿಗೆ ಬಡ್ತಿಯಲ್ಲಿ ಮೀಸಲಿಗೆ ಸುಪ್ರೀಂಕೋರ್ಟ್ ತಡೆ

ಕ.ಪ್ರ. 17-4-19

## ಮುಂದಿನ ಆದೇಶದವರೆಗೆ ಮೀಸಲು ಬಡ್ತಿ ನೀಡುವಂತಿಲ್ಲ: ಸುಪ್ರೀಂ

ನವದೆಹಲಿ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸರ್ಕಾರಿ ನೌಕರರಿಗೆ ಮೀಸಲಾತಿ ಆಧಾರದಲ್ಲಿ ಬಡ್ತಿ ನೀಡುವುದಕ್ಕೆ ಸುಪ್ರೀಂಕೋರ್ಟ್ ತಡೆ ನೀಡಿದೆ. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರಗಳು ಮೀಸಲು ಬಡ್ತಿಗೆ ಸಂಬಂಧಿಸಿದಂತೆ ಪ್ರಮಾಣೀಕೃತ ಮಾಹಿತಿಯನ್ನು ಸಲ್ಲಿಸಲು ವಿಫಲವಾದ ಹಿನ್ನೆಲೆಯಲ್ಲಿ ಸುಪ್ರೀಂಕೋರ್ಟ್ ಸೋಮವಾರ ಈ ವಿಷಯದಲ್ಲಿ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಆದೇಶ ಹೊರಡಿಸಿದೆ.

'ಈ ವಿಷಯವನ್ನು ಸುಪ್ರೀಂಕೋರ್ಟ್ ಇತ್ಯರ್ಥಪಡಿಸುವವರೆಗೆ ಎಸ್‌ಸಿ, ಎಸ್‌ಟಿ ನೌಕರರಿಗೆ ಮೀಸಲು ಆಧಾರದಲ್ಲಿ ಬಡ್ತಿ ನೀಡುವಂತಿಲ್ಲ' ಎಂದು ಸುಪ್ರೀಂಕೋರ್ಟ್‌ನ ಎಸ್.ಎ.ಬೋಬ್ಡೆ ಮತ್ತು ಅಬ್ದುಲ್ ನಜೀರ್ ಅವರ ಪೀಠ ಸ್ಪಷ್ಟವಾಗಿ ಹೇಳಿದೆ.

ಮೀಸಲು ಬಡ್ತಿಯ ಮೂಲ ವಿವಾದ ಸುಪ್ರೀಂಕೋರ್ಟ್‌ನ ಐವರು ನ್ಯಾಯಮೂರ್ತಿಗಳ ಸಂವಿಧಾನ ಪೀಠದಲ್ಲಿದೆ. ಸಂವಿಧಾನ ಪೀಠವು ಕಳೆದ ವರ್ಷ ಸೆಪ್ಟೆಂಬರ್‌ನಲ್ಲಿ 'ಹೇಗೆ ಇತರೆ ಹಿಂದುಳಿದ ವರ್ಗದವರಿಗೆ



ಬಡ್ತಿಯಲ್ಲಿ ಮೀಸಲು ನೀಡುವಾಗ ಕೆನೆಪದರ ನೀತಿ ಅನ್ವಯಿಸಲಾಗುತ್ತದೆಯೋ ಹಾಗೆಯೇ ಎಸ್‌ಸಿ, ಎಸ್‌ಟಿಗಳ ಮೀಸಲು ಬಡ್ತಿಗೂ ಕೆನೆಪದರ ನೀತಿ ಅನ್ವಯಿಸಬೇಕು. ಇಲ್ಲದಿದ್ದರೆ ಈ ಎರಡು ಹಿಂದುಳಿದ ವರ್ಗದಲ್ಲಿರುವ ಶ್ರೀಮಂತರಿಗೆ ಮೀಸಲಿನ ಲಾಭ ದೊರಕಿಸಿಕೊಟ್ಟಂತಾಗುತ್ತದೆ' ಎಂದು ಹೇಳಿತ್ತು. ನಂತರ ಈ ವಿಷಯಕ್ಕೆ ಸಂಬಂಧಪಟ್ಟ ಕೇಂದ್ರ, ರಾಜ್ಯ ಸರ್ಕಾರಗಳ ಹಾಗೂ ಖಾಸಗಿ ವ್ಯಕ್ತಿಗಳ 84 ಇತರೆ ಅರ್ಜಿಗಳನ್ನು ಇತ್ಯರ್ಥಪಡಿಸಲು ಸಾಮಾನ್ಯ ಪೀಠಕ್ಕೆ ಸೂಚಿಸಿತ್ತು.

ಈ ಮಧ್ಯೆ, ಮೀಸಲು ಬಡ್ತಿಗೆ ಸಂಬಂಧಪಟ್ಟ ಎರಡು ಪ್ರಕರಣಗಳಲ್ಲಿ ಸುಪ್ರೀಂಕೋರ್ಟ್‌ನಲ್ಲೇ ವ್ಯತಿರಿಕ್ತ ಆದೇಶಗಳು ಬಂದಿದ್ದವು. ಒಂದು ಆದೇಶದಲ್ಲಿ ಸುಪ್ರೀಂಕೋರ್ಟ್, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಮೀಸಲು ಬಡ್ತಿಗೆ ಸಂಬಂಧಿಸಿದ ಪ್ರಮಾಣೀಕೃತ ದತ್ತಾಂಶಗಳನ್ನು ಸಲ್ಲಿಸಲು ಸೂಚಿಸಿತ್ತು. ಮತ್ತೊಂದು ಆದೇಶದಲ್ಲಿ ಈ ವಿಷಯ ಇತ್ಯರ್ಥವಾಗುವವರೆಗೆ ಹಿಂದಿನಂತೆ ಮೀಸಲು ಬಡ್ತಿ ನೀಡುವುದನ್ನು ಮುಂದುವರೆಸಲು ಹೇಳಿತ್ತು. ಹೀಗಾಗಿ ಗೊಂದಲ ಸೃಷ್ಟಿಯಾಗಿತ್ತು. ಇದರ ನಡುವೆ, ದೆಹಲಿ ಹೈಕೋರ್ಟ್ ಮೀಸಲು ಬಡ್ತಿ ಮುಂದುವರೆಸುವ ಸುಪ್ರೀಂಕೋರ್ಟ್‌ನ ಆದೇಶವನ್ನು ಜಾರಿಗೊಳಿಸಬೇಕು ಎಂದು ಕೇಂದ್ರ ಸರ್ಕಾರಕ್ಕೆ ಸೂಚಿಸಿತ್ತು. ಈ ಹಿನ್ನೆಲೆಯಲ್ಲಿ ಸ್ಪಷ್ಟನೆ ಕೋರಿ ಕೇಂದ್ರ ಸರ್ಕಾರ ಸುಪ್ರೀಂಕೋರ್ಟ್‌ಗೆ ಹೋಗಿತ್ತು. ಎಲ್ಲ ವಿಚಾರಗಳನ್ನು ಪರಾಮರ್ಶಿಸಿದ ಸುಪ್ರೀಂಕೋರ್ಟ್, ಮುಂದಿನ ಆದೇಶ ನೀಡುವವರೆಗೆ ಬಡ್ತಿ ಮೀಸಲು ನೀಡುವಂತಿಲ್ಲ ಎಂದು ತಡೆಯಾಜ್ಞೆ ಹೊರಡಿಸಿದೆ.

2